ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 25/12/20

# ಆರೋಗ್ಯ ವ್ಯವಸ್ಥೆಗೆ ಆಧುನಿಕತೆಯ ಸ್ಪರ್ಶ



ಸಂ.ಕ.ಸಮಾಚಾರ ಬೆಂಗಳೂರು

ರಾಜ್ಯದ ಪ್ರತೀ ವ್ಯಕ್ತಿಗೂ ಉಚಿತ ಹಾಗೂ ಗುಣಮಟ್ಟದ ಆರೋಗ್ಯ ಸೇವೆ ಲಭಿಸಬೇಕೆಂಬ ಉದ್ದೇಶದೊಂದಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಆಧುನಿಕ ತಂತ್ರಜ್ಞಾನದ ಸ್ಪರ್ಶ ನೀಡಿ ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಉನ್ನತೀಕರಣ ಸಂಬಂಧ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಗೃಹಕಚೇರಿ ಕೃಷ್ಣಾದಲ್ಲಿ ಗುರುವಾರ ಸಭೆ ನಡೆಯಿತು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಆರೋಗ್ಯ ಸಚಿವ ಡಾ.ಕೆ.ಸುಧಾಕರ್, ಇಡೀ ದೇಶದಲ್ಲಿ ಕರ್ನಾಟಕದ ಆರೋಗ್ಯ ಸೇವೆ ಉತ್ತಮ ಹಾಗೂ ಮಾದರಿಯಾಗಲು ಪೂರಕವಾಗಿ ಯೋಜನೆ ರೂಪಿಸಲಾಗಿದೆ ಎಂದರು.

ರಾಜ್ಯದಲ್ಲಿ 2,380 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. ಅಸ್ತಿತ್ವದಲ್ಲಿರುವ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು ಹೊಸ ಯೋಜನೆಯ ಉದ್ದೇಶ. ಪಿಎಚ್‌ಸಿಯಲ್ಲಿ 6 ಹಾಸಿಗೆ ಇದ್ದು, ಅದನ್ನು 12 ರಿಂದ 20 ಹಾಸಿಗೆಗೆ ಹೆಚ್ಚಿಸಲಾಗುವುದು. ವೈದ್ಯರ ಸಂಖ್ಯೆಯನ್ನು ಕನಿಷ್ಠ 3–4 ಕ್ಕೆ ಹೆಚ್ಚಿಸಲಾಗುವುದು. ಈ ಪೈಕಿ ಒಬ್ಬ ಮಹಿಳಾ ವೈದ್ಯೆ ಹಾಗೂ ಮತ್ತೊಬ್ಬರು ಆಯುಷ್ ವೈದ್ಯರಿರುತ್ತಾರೆ ಎಂದು ವಿವರಿಸಿದರು.

ಆಸ್ಪತ್ರೆ ಸಮುಚ್ಚಯದಲ್ಲಿ ನರ್ಸ್, ವೈದ್ಯರಿಗೆ ವಸತಿ, ಇತರೆ ಆರೋಗ್ಯ ಸಿಬ್ಬಂದಿಗೆ ವಸತಿ ಕಲ್ಪಿಸಲಾಗುತ್ತದೆ. 2 ಎಕರೆ ಪ್ರದೇಶದಲ್ಲಿ 6–8 ಕೋಟಿ ರೂ. ಖರ್ಚು ಮಾಡಿ ಹೊಸ ಪಿಎಚ್‌ಸಿ ನಿರ್ಮಿಸಲಾಗುತ್ತದೆ. 12 ಹಾಸಿಗೆಯ ವಿಭಾಗ, ತಾಯಿ ಮತ್ತು ಶಿಶು ಕಾಳಜಿ ಕೇಂದ್ರ, ಪ್ರಯೋಗಾಲಯ ಇರಲಿದೆ. ಮಧುಮೇಹ ಪರೀಕ್ಷೆ, ರಕ್ತ ಪರೀಕ್ಷೆ ಸೇರಿದಂತೆ ನಾನಾ ಪರೀಕ್ಷೆಗಳನ್ನು ಉಚಿತವಾಗಿ ಮಾಡುವ ವ್ಯವಸ್ಥೆ ಇರಲಿದೆ ಎಂದು ವಿವರಿಸಿದರು.

- ಪ್ರಾಥಮಿಕ ಆರೋಗ್ಯ ಕೇಂದ್ರ ಮೇಲ್ದರ್ಜೆಗೆ
- 6-8 ಕೋಟಿ ವೆಚ್ಚದಲ್ಲಿ ಆಸ್ಪತ್ರೆ ನಿರ್ಮಾಣ
- ಅಂತರ್ಜಾಲ ನೆರವಿನ ಇ-ಆಸ್ಪತ್ರೆ ಸೌಲಭ್ಯ
- 30 ಸಾವಿರ ಜನಸಂಖ್ಯೆಗೆ 1 ಆ್ಯಂಬುಲೆನ್ಸ್

**ಇ–ಆಸ್ಪತ್ರೆ:** ಸಣ್ಣ ಆಸ್ಪತ್ರೆಗಳಿಂದ ಆರಂಭವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆವರೆಗೂ ಅಂತರ್ಜಾಲ ಬಳಸಿ ಸಂಪರ್ಕ ಕಲ್ಪಿಸುವ ಇ–ಆಸ್ಪತ್ರೆ ಸೌಲಭ್ಯವಿರಲಿದೆ. ಪಿಎಚ್‌ಸಿಯಲ್ಲಿ ಎಕ್ಸ್ ರೇ ತೆಗೆದರೂ ಅದಕ್ಕೆ ಬೇಕಾದ ಸಲಹೆಯನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತಜ್ಞರು ನೀಡುವಂತಹ ವ್ಯವಸ್ಥೆ ಇರಲಿದೆ ಎಂದು ಸಚಿವರು ತಿಳಿಸಿದರು. ಉತ್ತಮ ಗುಣಮಟ್ಟದ ಕ್ಯಾಮರಾ ಮತ್ತು ಟಿವಿಯೊಂದಿಗೆ ಟೆಲಿ–ಮೆಡಿಸಿನ್ ವ್ಯವಸ್ಥೆ ಇರಲಿದೆ ಎಂದು ತಿಳಿಸಿದರು.

80 ಸಾವಿರ ಜನಸಂಖ್ಯೆಗೆ ಒಂದರಂತೆ ಇರುವ ಸಮುದಾಯ ಆರೋಗ್ಯ ಕೇಂದ್ರವನ್ನು ಕೂಡ ಮೇಲ್ದರ್ಜೆಗೇರಿಸಲಾಗುವುದು. 200 ಹಾಸಿಗೆಗಳ ಜಿಲ್ಲಾಸ್ಪತ್ರೆಗಳು ಮುಂದಿನ ದಿನಗಳಲ್ಲಿ 500–700 ಹಾಸಿಗೆಯ ಆಸ್ಪತ್ರೆಯಾಗಿ ಅಭಿವೃದ್ಧಿಯಾಗಲಿವೆ. ಬೆಂಗಳೂರು, ಹುಬ್ಬಳ್ಳಿಗೆ ಆರೋಗ್ಯ ಕೇಂದ್ರಗಳು ಕೇಂದ್ರೀಕೃತವಾಗದೆ ಎಲ್ಲ ಕಡೆಗೂ ವಿಸ್ತರಿಸಲಾಗುವುದು. ಆಯಾ ಜಿಲ್ಲೆಗಳಲ್ಲಿ ಆರೋಗ್ಯ ಸೇವೆ ಸಿಗುವಂತೆ ಮಾಡಲಾಗುವುದು ಎಂದರು.

## ಆಂಬ್ಯುಲೆನ್ಸ್ ಸೇವೆ

1 ಲಕ್ಷ ಜನಸಂಖ್ಯೆಗೆ ಒಂದು ಆಂಬ್ಯುಲೆನ್ಸ್ ಇದ್ದಿದ್ದನ್ನು ಇದೀಗ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಒಂದು ಆಂಬ್ಯುಲೆನ್ಸ್‌ಗೆ ವಿಸ್ತರಿಸಲಾಗುವುದು. ಅಂದರೆ, 30 ಸಾವಿರ ಜನಸಂಖ್ಯೆಗೆ ಒಂದು ಆಂಬ್ಯುಲೆನ್ಸ್ ಸೇವೆ ಲಭ್ಯವಾಗಲಿದೆ ಎಂದು ಸಚಿವ ಡಾ.ಕೆ.ಸುಧಾಕರ್ ಮಾಹಿತಿ ನೀಡಿದರು.